ಆ) ಇ) ಈ) ಉ)

ಮೇಲಿನ ಉಪ ಪ್ರಶ್ನೆ (ಅ)ಗೆ ನೀಡಲಾದ ಉತ್ತರದಿಂದ ಈ ಪ್ರಶ್ನೆಗಳು ಉದ್ಭವಿಸುವುದಿಲ್ಲ.

ಔರಾದ್ ತಾಳ್ಲೂಕಿನ ಖೇರ್ಡಾ (ಬಿ) ಗ್ರಾಮದಲ್ಲಿ 33 ಕೆ.ವಿ. ಸ್ಟೇಷನ್ ಸ್ಥಾಪಿಸುವ ಬಗ್ಗೆ

4400 (5280) : ಶ್ರೀ ಗುಂಡಪ್ಪ ವಕೀಲ್ (ಔರಾದ್) : ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಔರಾದ್ ತಾಲ್ಲೂಕಿನ ಖೇರ್ಡಾ (ಬಿ) ಗ್ರಾಮಕ್ಕೆ 33 ಕೆ.ವಿ. ಸ್ಟೇಷನ್ ಮಂಜೂರಾಗಿದೆಯೇ?

ಆ) ಸದರಿ ಕಾಮಗಾರಿ ಈ ವರ್ಷ ಕೈಗೊಳ್ಳಲಾಗುವುದೇ?

ಶ್ರೀ ಬಸವರಾಜ ಪಾಟೀಲ್ (ಇಂಧನ ರಾಜ್ಯ ಸಚಿವರು):

ಅ) ಹೌದು.

ಆ) ಇಲ್ಲ. ಹಣಕಾಸಿನ ಹೊಂದಾಣಿಕೆಯನ್ನು ಮಾಡಿಕೊಂಡು, ಮುಂಬರುವ ವರ್ಷವಾದ 2004–05 ರಲ್ಲಿ ಸದರೀ ಕಾಮಗಾರಿಯನ್ನು ಕೈಗೊಳ್ಳಲು ಉದ್ದೇಶಿಸಿದೆ.

ಔರಾದ್ ನಗರದಲ್ಲಿ ಕುಡಿಯುವ ನೀರಿನ ಸರಬರಾಜು ಯೋಜನೆ

4401 (5281) : ಶ್ರೀ ಗುಂಡಪ್ಪ ವಕೀಲ್ (ಔರಾದ್) : ಮಾನ್ಯ ಪೌರಾಡಳಿತ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಔರಾದ್ ನಗರದ 30,000 ಜನರಿಗೆ ಕುಡಿಯುವ ನೀರಿನ ಸಮಸ್ಯೆ ಇದ್ದು, ಈ ಬಗ್ಗೆ ಸರ್ಕಾರ ಗಮನಹರಿಸಿ, ತ್ವರಿತವಾಗಿ ಏನಾದರೂ ಯೋಜನೆ ಕೈಗೊಳ್ಳುವುದೇ?

ಶ್ರೀ ಕುಮಾರ್ ಎಸ್. ಬಂಗಾರಪ್ಪ (ಪೌರಾಡಳಿತ ರಾಜ್ಯ ಸಚಿವರು)

ಅ) ಔರಾದ್ ಪಟ್ಟಣ ಪಂಚಾಯತಿಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ನಿವಾರಿಸಲು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯವರು ರೂ. 258.15 ಲಕ್ಷಗಳಲ್ಲಿ ಯೋಜನೆಯನ್ನು ರೂಪಿಸಿದ್ದು, ಈ ಯೋಜನೆಗೆ ಸರ್ಕಾರದ ಮಂಜೂರಾತಿಯನ್ನು ನೀಡಲಾಗಿದೆ.

ಸಣ್ಣ ನೀರಾವರಿ ಇಲಾಖೆಯಲ್ಲಿ ಅನೇಕ ವಸ್ತುಗಳನ್ನು ಹೆಚ್ಚಿನ ಬೆಲೆಗೆ ಖರೀದಿ ಮಾಡಿರುವ ಬಗ್ಗೆ

4402 (5071) : ಶ್ರೀ ಗುರುಸ್ವಾಮಿ ಎ.ಎಸ್. (ಚಾಮುಂಡೇಶ್ವರಿ) : ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸಣ್ಣ ನೀರಾವರಿ ಇಲಾಖೆಯ ಗುಲ್ಬರ್ಗಾ ವಿಭಾಗದಲ್ಲಿ ಎಂ.ಎಸ್. ಗೇಟುಗಳು, ಆಯಿಲ್ ಇತ್ಯಾದಿ ವಸ್ತುಗಳನ್ನು ಸರಕು ಖರೀದಿ ಇಲಾಖೆಯ ಮೂಲಕ ಕೊಳ್ಳದೆ ಹೆಚ್ಚಿನ ಬೆಲೆಗೆ ನೇರವಾಗಿ ಖರೀದಿ ಮಾಡಿರುವ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ರೀತಿ ಖರೀದಿ ಮಾಡಿದ ಕಾರಣ ಸರ್ಕಾರಕ್ಕೆ ಉಂಟಾದ ನಷ್ಟ ಎಷ್ಟು ಹಾಗೂ ಇದನ್ನು ಹೇಗೆ ವಸೂಲಿ ಮಾಡಲಾಗಿದೆ;